# ಮುಖ್ಯ ಮಹಾನಗರ ದಂಡಾಧಿಕಾರಿಯವರ ನ್ಯಾಯಾಲಯ, ಬೆಂಗಳೂರು ನಗರ

## ಸಿ.ಸಿ.ನಂ.28309/2021

| | |
|---|---|
| ಸಾಕ್ಷಿದಾರರ ಹೆಸರು : | ಶ್ರೀಮತಿ. ಕುಮಾರಿ |
| ಗಂಡನ ಹೆಸರು : | ನಟರಾಜು |
| ವಯಸ್ಸು : | 55 ವರ್ಷ |
| ಉದ್ಯೋಗ : | ಗೃಹಿಣಿ |
| ವಾಸ : | ತಿಲಕ್ ನಗರ, ಬೆಂಗಳೂರು. |

**ದಿನಾಂಕ 08/05/2026 ರಂದು ಸಾಕ್ಷಿಗೆ ಪ್ರಮಾಣ ವಚನ ಭೋಧಿಸಲಾಯಿತು.**
**ಮುಖ್ಯ ವಿಚಾರಣೆಃ ಹಿರಿಯ ಸ.ಸ.ಅ ರವರಿಂದಃ**

1. ಚಾಸಾ-4 ಮತ್ತು 5 ರವರು ನಮ್ಮ ಮನೆಯ ಅಕ್ಕಪಕ್ಕದವರು. ಆರೋಪಿ ನನ್ನ ಗಂಡ. ನಾನು ಮತ್ತು ಆರೋಪಿ ಪರಸ್ಪರ ಪ್ರೀತಿಸಿ ದಿನಾಂಕ 29/03/1995 ರಂದು ಬನ್ನೇರುಘಟ್ಟದಲ್ಲಿರುವ ಚಂಪಕಧಾಮ ದೇವಸ್ಥಾನದಲ್ಲಿ ಹಿಂದೂ ಸಂಪ್ರದಾಯದಂತೆ ಮದುವೆಯಾಗಿರುತ್ತದೆ. ನಮಗೆ ಇಬ್ಬರು ಹೆಣ್ಣು ಮಕ್ಕಳು.

2. 2021 ನೇ ಸಾಲಿನಲ್ಲಿ ಆರೋಪಿಯು ಸರಿಯಾಗಿ ಮನೆಗೆ ಬಾರದ ಕಾರಣ ಪೊಲೀಸ್ ಠಾಣೆಗೆ ಹೋಗಿ ಆರೋಪಿಯನ್ನು ಕರೆಸಿ ಬುದ್ದಿ ಹೇಳುವಂತೆ ಠಾಣೆಗೆ ಹೋಗಿದ್ದಾಗ ಪೊಲೀಸರು ಕೆಲವು ದಾಖಲೆಗಳಿಗೆ ನನ್ನ ಸಹಿಗಳನ್ನು ಪಡೆದಿರುತ್ತಾರೆ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ. ಆರೋಪಿಯು ನನಗೆ ಯಾವುದೇ ದೈಹಿಕ ಹಾಗೂ ಮಾನಸಿಕ ಕಿರುಕುಳ ನೀಡಿರುವುದಿಲ್ಲ. ಸಾಕ್ಷಿಗೆ ದೂರು ಮತ್ತು ಪಂಚನಾಮೆಯನ್ನು ತೋರಿಸಿದಾಗ ಅವುಗಳ ಮೇಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿದ್ದಾರೆ. **ಆದ್ದರಿಂದ ದೂರು ಮತ್ತು ಪಂಚನಾಮೆಯನ್ನು ನಿಪಿ-1 ಮತ್ತು 2**

**ಎಂದು, ಸಾಕ್ಷಿಯ ಸಹಿಗಳನ್ನು ನಿಪಿ-1(ಎ) ಮತ್ತು ನಿಪಿ-2(ಎ) ಎಂದು ಗುರುತಿಸಲಾಯಿತು.**

(ಈ ಹಂತದಲ್ಲಿ ಹಿ.ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದಾರೆ, ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಹಿ.ಸ.ಸ.ಅ ರವರಿಂದಃ**

3. ಮದುವೆಯಾದ ನಂತರ ಕೆಲವು ವರ್ಷಗಳ ಕಾಲ ಆರೋಪಿಯು ಚೆನ್ನಾಗಿದ್ದು, ನಂತರ ಮನೆಗೆ ಬಾರದೇ ಆಗಾಗ ಬಂದು ನನಗೆ ಹೊಡೆಯುವುದು, ಬೈಯ್ಯುವುದು, ಮನೆ ಸಂಸಾರಕ್ಕೆ ಸರಿಯಾದ ಖರ್ಚು ವೆಚ್ಚಗಳನ್ನು ನೋಡಿಕೊಳ್ಳದೇ, ದೈಹಿಕ ಹಾಗೂ ಮಾನಸಿಕ ಕಿರುಕುಳ ನೀಡುತ್ತಿದ್ದರು ಎಂದರೆ ಸರಿಯಲ್ಲ. ಈ ವಿಚಾರವಾಗಿ ಪೊಲೀಸ್ ಠಾಣೆಗೆ ನಿಪಿ-1 ರಂತೆ ದೂರು ನೀಡಿದ್ದೇನೆ ಎಂದರೆ ಸರಿಯಲ್ಲ. ದೂರು ನೀಡಿದ ನಂತರ ಪೊಲೀಸರು ಕೃತ್ಯ ನಡೆದ ಸ್ಥಳಕ್ಕೆ ಬಂದು ನಿಪಿ-2 ರಂತೆ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಾನು ಪೊಲೀಸರ ಸಮಕ್ಷಮ "ನಾನು .... ಹಾಜರಾಗುತ್ತೇನೆ" ಎಂಬುದಾಗಿ ಈಗ ಓದಿ ಹೇಳಿದಂತೆ ಮರುಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. **ಸಾಕ್ಷಿಯ ಮರುಹೇಳಿಕೆಯನ್ನು ನಿಪಿ-3 ಎಂದು ಗುರುತಿಸಲಾಯಿತು**. ನಾನು ಮತ್ತು ಆರೋಪಿ ರಾಜಿ ಮಾಡಿಕೊಂಡಿದ್ದೇವೆ ಎಂದರೆ ಸರಿ. ರಾಜಿ ಮಾಡಿಕೊಂಡಿರುವ ಕಾರಣ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ ಏನು ಇಲ್ಲ ಎಂದು ತಿಳಿಸಿರುತ್ತಾರೆ.**
**ಮರುವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ. ಕೇ. ಸ. ಇ.

(ರಂಗೇಗೌಡ ಸಿ.)
ಮು.ಮ.ದಂ.ನ್ಯಾ.ಬೆಂ.ನಗರ.